ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ನಾಳೆಯಿಂದ ವಿಧಾನಮಂಡಲ ಅಧಿವೇಶನ

## ಗೋಹತ್ಯೆ, ಲವ್ ಜಿಹಾದ್ ಕಾಯ್ದೆ ವಿಚಾರ ಜಟಾಪಟಿ ಸಾಧ್ಯತೆ ■ 10 ಮಸೂದೆಗಳ ಮಂಡನೆ, 5 ದಿನ ಪ್ರಶ್ನೋತ್ತರ ಕಲಾಪ

ಬೆಂಗಳೂರು: ವಿಧಾನಮಂಡಲದ ಚಳಿಗಾಲದ ಅಧಿವೇಶನ ಸೋಮವಾರದಿಂದ ಆರಂಭವಾಗಲಿದ್ದು, ಗೋಹತ್ಯೆ ನಿಷೇಧ ಹಾಗೂ ಲವ್ ಜಿಹಾದ್ ತಡೆಗೆ ಮತಾಂತರ ನಿಷೇಧ ಕಾಯ್ದೆ ಜಾರಿ ವಿಚಾರ ಆಡಳಿತ ಹಾಗೂ ಪ್ರತಿಪಕ್ಷಗಳ ನಡುವೆ ಸಂಘರ್ಷಕ್ಕೆ ಕಾರಣವಾಗುವ ನಿರೀಕ್ಷೆಯಿದೆ.

ಸಂಪುಟ ವಿಸ್ತರಣೆ ಹಾಗೂ ಪುನಾರಚನೆ ಗೊಂದಲ, ಶಾಸಕರ ಬಹಿರಂಗ ಹೇಳಿಕೆಗಳನ್ನೇ ಅಸ್ತ್ರವಾಗಿಟ್ಟುಕೊಂಡು ಸರ್ಕಾರ ಟೇಕಾಫ್ ಆಗಿಲ್ಲ ಎಂದು ಬಿಜೆಪಿ ವಿರುದ್ಧ ಮುಗಿಬೀಳಲು ಪ್ರತಿಪಕ್ಷ ಕಾಂಗ್ರೆಸ್ ಸಜ್ಜಾಗುತ್ತಿದೆ.

ಪ್ರವಾಹ ಸಂತ್ರಸ್ತರ ಪರಿಹಾರ, ರೈತರ ಸಮಸ್ಯೆಗಳನ್ನು ಮುಂದಿಟ್ಟು ಅಧಿವೇಶನದಲ್ಲಿ ಹೋರಾಟಕ್ಕೆ ಜೆಡಿಎಸ್ ತೀರ್ಮಾನಿಸಿದೆ. ಆದರೆ, ಪ್ರತಿಪಕ್ಷಗಳಿಗೆ ಅಂಕಿ-ಅಂಶಗಳ ಸಹಿತ ತಿರುಗೇಟು ನೀಡಲು ಆಡಳಿತಾರೂಢ ಬಿಜೆಪಿ ಪ್ರತಿತಂತ್ರ ರೂಪಿಸಿದೆ.





ಗೋಹತ್ಯೆ ನಿಷೇಧ ಮತ್ತು ಲವ್ ಜಿಹಾದ್ ತಡೆಗೆ ಕಾಯ್ದೆ ಜಾರಿಗೆ ತೀರ್ಮಾನ ಮಾಡಿದ್ದೇವೆ. ಈ ಅಧಿವೇಶನದಲ್ಲಿ ಸಾಧ್ಯವಾದರೆ ಗೋಹತ್ಯೆ ಮಸೂದೆ ಜಾರಿಗೆ ತರಲಾಗುವುದು.

• ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿ.

ಏಳು ದಿನಗಳ ಕಾಲ ಅಧಿವೇಶನ ನಡೆಯಲಿದ್ದು ಹತ್ತು ಮಸೂದೆಗಳು ಮಂಡನೆಯಾಗಲಿದ್ದು, ಐದು ದಿನ ಪ್ರಶ್ನೋತ್ತರ ಕಲಾಪ ಇರಲಿದೆ. ಕೊನೆಯ ಎರಡು ದಿನ ಒಂದು ದೇಶ ಒಂದು ಚುನಾವಣೆ ಕುರಿತು ಚರ್ಚೆ ನಡೆಯಲಿದೆ.

ಎಪಿಎಂಸಿ ಹಾಗೂ ಭೂ ಸುಧಾರಣೆ ತಿದ್ದುಪಡಿ ವಿಧೇಯಕ ಕಳೆದ ಅಧಿವೇಶನದಲ್ಲಿ ಪರಿಷತ್‌ನಲ್ಲಿ ಅಂಗೀಕಾರವಾಗದ ಹಿನ್ನೆಲೆಯಲ್ಲಿ ಸುಗ್ರೀವಾಜ್ಞೆ ತರಲಾಗಿದ್ದು, ಈ ಅಧಿವೇಶನದಲ್ಲಿ ಮತ್ತೆ ಮಂಡಿಸಿ ಅನುಮೋದನೆ ಪಡೆಯಲು ತೀರ್ಮಾನಿಸಲಾಗಿದೆ.

ಪ್ರಮುಖವಾಗಿ ಗೋಹತ್ಯೆ ನಿಷೇಧ ಕಾಯ್ದೆ ಹಾಗೂ ಲವ್‌ಜಿಹಾದ್ ತಡೆಗೆ ಮತಾಂತರ ನಿಷೇಧ ಕಾಯ್ದೆ ಅಧಿವೇಶನದಲ್ಲಿ ಮಂಡಿಸುವ ನಿರೀಕ್ಷೆಯಿದ್ದು, ಈಗಾಗಲೇ ಕಾಂಗ್ರೆಸ್ ಎರಡೂ ವಿಧೇಯಕಗಳಿಗೆ ವಿರೋಧವಿದೆ ಎಂದು ಹೇಳಿದ್ದು ಜಟಾಪಟಿಗೆ ಕಾರಣವಾಗಬಹುದು.

ಈ ಮಧ್ಯೆ, ಅಧಿವೇಶನಕ್ಕೆ ಮುನ್ನವೇ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಕಾಂಗ್ರೆಸ್ ನಾಯಕರ ವಿರುದ್ಧ ಮುಗಿಬಿದ್ದಿದ್ದು ಅಧಿವೇಶನದಲ್ಲಿ ಆಡಳಿತಾರೂಢ ಬಿಜೆಪಿ ವಿರುದ್ಧ ಕಾಂಗ್ರೆಸ್ ವಿಷಯವಾರು ಹೋರಾಟಕ್ಕೆ ಮುಂದಾದರೆ ಯಾವ ನಿಲುವು ತಾಳಲಿದೆ ಎಂಬುದು ಕುತೂಹಲ ಮೂಡಿಸಿದೆ.

ವಿಧಾನಪರಿಷತ್‌ನಲ್ಲಿ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ನೋಟಿಸ್ ನೀಡಲಾಗಿದ್ದು ಅದು ಸಹ ಚರ್ಚೆಗೆ ಬರುವ ಸಾಧ್ಯತೆಯಿದೆ.

ಪರಿಷತ್‌ನಲ್ಲಿ ಸಭಾಪತಿ ಸ್ಥಾನ ಬಿಜೆಪಿ ಪಡೆದರೆ ವಿಧೇಯಕ ಅಂಗೀಕಾರ ಸುಲಭವಾಗಲಿದೆ ಎಂಬ ಲೆಕ್ಕಾಚಾರದಲ್ಲಿ ಜೆಡಿಎಸ್ ಜತೆಗೂಡಿ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರನ್ನು ಕೆಳಗಿಳಿಸಲು ಕಾರ್ಯತಂತ್ರ ರೂಪಿಸಲಾಗಿದೆ.

ಸಭಾಪತಿ ಸ್ಥಾನ ತಮಗೆ ಬಿಟ್ಟುಕೊಡಿ, ಹಿರಿಯರಾದ ಬಸವರಾಜ ಹೊರಟ್ಟಿ ಅವರನ್ನು ಸಭಾಪತಿಯನ್ನಾಗಿ ಮಾಡೋಣ ಎಂದು ಜೆಡಿಎಸ್ ಪಟ್ಟು ಹಿಡಿಯಬಹುದು ಎಂದು ಹೇಳಲಾಗುತ್ತಿದೆ. ಆದರೆ, ಬಿಜೆಪಿ ಈಗಿರುವ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಮುಂದಾಗಿರುವುದೇ ಬಿಜೆಪಿಯ ಸಭಾಪತಿ ಇರಬೇಕು ಎಂಬ ಕಾರಣಕ್ಕೆ. ಹೀಗಿರುವಾಗ ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡುವುದೇ ಎಂಬುದನ್ನು ಕಾದು ನೋಡಬೇಕಾಗಿದೆ.

**ಇಂದು ಕಾಂಗ್ರೆಸ್ ಸಭೆ:** ವಿಧಾನಮಂಡಲ ಅಧಿವೇಶನ ಹಿನ್ನೆಲೆಯಲ್ಲಿ ಭಾನುವಾರ ಬೆಳಗ್ಗೆ 11 ಗಂಟೆಗೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರ ನಿವಾಸದಲ್ಲಿ ಉಭಯ ಸದನಗಳ ಹಿರಿಯ ಶಾಸಕರ ಸಭೆ ಕರೆಯಲಾಗಿದೆ.

**ಜೆಡಿಎಸ್ ಸಭೆ:** ಅಧಿವೇಶನ ಹಿನ್ನೆಲೆಯಲ್ಲಿ ಜೆಡಿಎಸ್ ಸೋಮವಾರ ಬೆಳಗ್ಗೆ ಶಾಸಕಾಂಗ ಪಕ್ಷದ ಸಭೆ ನಡೆಸುವ ನಿರೀಕ್ಷೆಯಿದೆ.